# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ , ಕಾರವಾರ

ಸಿ.ಸಿ. ನಂಃ 88/2020 ಪಿ.ಡಬ್ಲ್ಯೂಃ 1

ಸಿಡಬ್ಲೂಃ 3

ಸಾಕ್ಷಿದಾರರ ಹೆಸರು : ಜಗದೀಶ

ತಂದೆಯ ಹೆಸರು : ಮಾದು ನಾಗೇಕರ

ವಯಸ್ಸು : 49 ವರ್ಷ

ಉದ್ಯೋಗ : ಖಾಸಗೀ ವ್ಯಾಪಾರ

ವಾಸ್ತವ್ಯ : ಮಕ್ಕೇರಿ , ಕಾರವಾರ

ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕಃ 08-03-2022

## ಮುಖ್ಯ ವಿಚಾರಣೆಃ ಎ ಪಿ ಪಿ ಯವರಿಂದಃ

ಈಗ ನನಗೆ ಒಂದು ದಾಖಲೆಯನ್ನು ತೋರಿಸುತ್ತಿದ್ದು , ಅದು ಪಂಚನಾಮೆ ಆಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪಂಚನಾಮೆಯನ್ನು ನಿಪಿ.1 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಸದರಿ ಪಂಚನಾಮೆಯನ್ನು 3 ವರ್ಷಗಳ ಹಿಂದೆ ಮಾಡಲಾಯಿತು. ಆದರೆ ಯಾವ ಕಾರಣಕ್ಕೆ ಮಾಡಿದ್ದೇನೆಂದು ನನಗೆ ಗೊತ್ತಿಲ್ಲಾ. ಪೋಲೀಸರು ಸಹಿ ಮಾಡು ಎಂದು ಹೇಳಿದ ಕಾರಣಕ್ಕೆ ನಾನು ಸಹಿ ಮಾಡಿದ್ದೇನೆ. ಸದರಿ ಸಹಿಯನ್ನು ಕಾಜುಬಾಗದ ರಸ್ತೆಯಲ್ಲಿ ಮಾಡಿರುತ್ತೇನೆ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನಾನು ಗುರುತಿಸುತಿವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಎಪಿಪಿ ರವರು ಪಾಟೀ ಸವಾಲಿಗೆ ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

## ಪಾಟೀ ಸವಾಲುಃ ಎಪಿಪಿ ರವರಿಂದ

2. ದಿನಾಂಕಃ 21.06.2019 ರಂದು ಅಂಗಡಿ ಗ್ರಾಮದಿಂದ ಕೋಟಾರ ಕಡೆಗೆ ಒಂದು ದ್ವಿಚಕ್ರ ವಾಹನ ಸಂಖ್ಯೆ ಕೆ ಎ 30 ವಿ 3885 ರಲ್ಲಿ ಆರೋಪಿತನು ಗೋವಾ ಫೆನ್ನಿ 25 ಲೀಟರನಷ್ಟು 2

ಚೀಲದಲ್ಲಿ ಒಟ್ಟು 50 ಲೀಟರ ಸಾಗಾಟ ಮಾಡುವುದು ಕಂಡು ಬಂತು. ಅದರಿಂದ 4 ಲೀಟರನಷ್ಟು 2 ಬಾಟಲಿಗಳು ರಾಸಾಯನಿಕ ಪರೀಕೆಗೋಸ್ಕರ ಜಪ್ತುಪಡಿಸಿಕೊಂಡು ಚಾಸಾ.2 ರವರ ಸಮಕ್ಷಮ ಪಂಚನಾಮೆಯನ್ನು ಸಮಯ 1.15 ರಿಂದ 2.15 ಗಂಟೆಯವರೆಗೆ ಸ್ಥಳದಲ್ಲಿ ಬರೆಯಲಾಯಿತು ಎಂದರೆ ಸರಿಯಲ್ಲ. ಮುದ್ದೆ ಮಾಲುಗಳನ್ನು ನಾನು ಗುರುತಿಸುವುದಿಲ್ಲ. ಈ ಎಲ್ಲಾ ವಿಷಯಗಳು ಗೊತ್ತಿದ್ದರೂ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ - ಏನೂ ಇಲ್ಲಾ -**

**ಮರುವಿಚಾರಣೆ – ಇಲ್ಲ –**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕೃತ ಮಾಡಿಸಲಾಯಿತು.

ಓ. ಹೇ.ಕೇ. ಸರಿ ಇದೆ.

**ಹೆ.ಪ್ರ.ದ.ನ್ಯಾದಂ. ಕಾರವಾರ**